# ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್ ಲಿಮಿಟೆಡ್

**ಕೇಂದ್ರ ಕಛೇರಿ, ರಾಯರಪೇಟೆ, ಶಿರಸಿ – 581 401 (ಉ.ಕ)**

**ದೂರವಾಣಿ ಸಂಖ್ಯೆ: 08384–226643**

## ನೇಮಕಾತಿ ಪ್ರಕಟಣೆ

**ಮೇಲ್ಕಂಡ ಬ್ಯಾಂಕಿನಲ್ಲಿ ಖಾಲಿ ಇರುವ ಈ ಕೆಳಗಿನ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

| ಹುದ್ದೆಯ ಪದನಾಮ | ಒಟ್ಟೂ ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|
| ಶಾಖಾ ವ್ಯವಸ್ಥಾಪಕ /ಲೆಕ್ಕಿಗ/ಕಾಯ್ದೆ ಅಧಿಕಾರಿ/ ವ್ಯವಸ್ಥಾಪಕರು (ಮಾಹಿತಿ ತಂತ್ರಜ್ಞಾನ) ಸದರಿ ಹುದ್ದೆಗಳು ಸಮನಾದ ಕೇಡರ್ ಹೊಂದಿರುತ್ತವೆ. | **8 (ಎಂಟು)** | ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಈ ಕೆಳಗಿನ ಯಾವುದೇ ಪದವಿಯಲ್ಲಿ ಕಡ್ಡಾಯವಾಗಿ ಶೇಕಡಾ 60 ಕ್ಕಿಂತ ಹೆಚ್ಚು ಅಂಕಗಳೊಂದಿಗೆ ತೇರ್ಗಡೆ ಹೊಂದಿರಬೇಕು.<br><br>**ಬಿ.ಕಾಮ್/ ಬಿ.ಬಿ.ಎ/ ಬಿ.ಬಿ.ಎಮ್/ ಬಿ.ಇ/ ಬಿ.ಎಸ್.ಸಿ*/ ಬಿ.ಎ.****<br><br>*ಬಿ.ಎಸ್.ಸಿ – ಗಣಿತ ಅಥವಾ ಸಂಖ್ಯಾಶಾಸ್ತ್ರ ವಿಷಯವನ್ನು ಕಡ್ಡಾಯವಾಗಿ ಒಂದು ಐಚ್ಚಿಕ ವಿಷಯವನ್ನಾಗಿ ಅಧ್ಯಯನ ಮಾಡಿರಬೇಕು.<br><br>**ಬಿ.ಎ – ಗಣಿತ, ಸಂಖ್ಯಾಶಾಸ್ತ್ರ ಅಥವಾ ಅರ್ಥಶಾಸ್ತ್ರ ವಿಷಯವನ್ನು ಕಡ್ಡಾಯವಾಗಿ ಒಂದು ಐಚ್ಚಿಕ ವಿಷಯವನ್ನಾಗಿ ಅಧ್ಯಯನ ಮಾಡಿರಬೇಕು<br><br>ಮತ್ತು ಬ್ಯಾಂಕಿಂಗ್ ಕ್ಷೇತ್ರದಲ್ಲಿ ಕನಿಷ್ಠ ಆಫೀಸರ್ ಹುದ್ದೆಗಿಂತ ಕಡಿಮೆ ಇಲ್ಲದ ಹುದ್ದೆಯಲ್ಲಿ ಕನಿಷ್ಠ 5 ವರ್ಷಗಳ ಸೇವೆ ಸಲ್ಲಿಸಿ ಅನುಭವ ಹೊಂದಿರತಕ್ಕದ್ದು.<br><br>ಹಾಗೂ ಕೆವೈಸಿ/ ಎಎಮ್ಎಲ್ / ರಿಸ್ಕ್ ಮ್ಯಾನೇಜ್‌ಮೆಂಟ್/ ಕ್ರೆಡಿಟ್ ಅಪ್ರೇಸಲ್/ ಎಂಐಎಸ್/ ಸ್ಟೆಚ್ಯುಟರಿ ಕಂಪ್ಲಾಯನ್ಸ್/ ಬಿಸಿನೆಸ್ ಡೆವೆಲಪ್‌ಮೆಂಟ್/ ಇನ್ವೆಸ್ಟಮೆಂಟ್/ ಗ್ರಾಹಕ ಸೇವೆ ಹಾಗೂ ಕುಂದು ಕೊರತೆ ನಿರ್ವಹಣೆ ವಿಭಾಗಗಳಲ್ಲಿ ಸೇವೆ ಸಲ್ಲಿಸಿದ ವಿಶೇಷ ಅನುಭವವನ್ನು ಹೊಂದಿದವರಿಗೆ ಪ್ರಥಮ ಆದ್ಯತೆ ನೀಡಲಾಗುವುದು.<br><br>ಎಂ.ಬಿ.ಎ ಅಥವಾ ಎಂ.ಕಾಂ ಅಥವಾ ಗಣಿತ / ಸಂಖ್ಯಾಶಾಸ್ತ್ರ/ ಅರ್ಥಶಾಸ್ತ್ರ / ಬ್ಯಾಂಕಿಂಗ್ / ಎಕೌಂಟನ್ಸಿ ವಿಷಯಗಳೊಂದಿಗೆ ಶೇಕಡಾ 60 ಕ್ಕಿಂತ ಹೆಚ್ಚು ಅಂಕಗಳೊಂದಿಗೆ ತೇರ್ಗಡೆಯಾಗಿ, ಸ್ನಾತಕೋತ್ತರ ಪದವಿ (ಮಾಸ್ಟರ್ ಡಿಗ್ರಿ) ಪಡೆದಿದ್ದಲ್ಲಿ ಹಾಗೂ ಡಿಪ್ಲೋಮಾ ಇನ್ ಬ್ಯಾಂಕಿಂಗ್/ ಡಿಪ್ಲೋಮಾ ಇನ್ ಕೋಒಪರೇಟಿವ್ ಬಿಸಿನೆಸ್ ಮ್ಯಾನೇಜ್ಮೆಂಟ್ / ಜೆ.ಎ.ಐ.ಐ.ಬಿ / ಸಿ.ಎ.ಐ.ಐ.ಬಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದವರಿಗೆ ಆದ್ಯತೆ ನೀಡಲಾಗುವುದು. | ರೂ. 52650–1250–53900–1450–62600–1650–72500–1900–83900–2200–97100 ಹಾಗೂ ಕಾಲಕಾಲಕ್ಕೆ ಕರ್ನಾಟಕ ರಾಜ್ಯ ಸರಕಾರಿ ನೌಕರರಿಗೆ ಅನ್ವಯವಾಗುವ ದರದಲ್ಲಿ ತುಟ್ಟಿಭತ್ಯೆ ಹಾಗೂ ಇತರ ಭತ್ಯೆಗಳು. |

**ನಿಬಂಧನೆಗಳು:**

1. ಅಭ್ಯರ್ಥಿಗಳು ಕನ್ನಡ ಹಾಗೂ ಇಂಗ್ಲೀಷ್ ಭಾಷೆಯಲ್ಲಿ ಓದುವ, ಬರೆಯುವ, ಮಾತನಾಡುವ ಜ್ಞಾನ ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಕಂಪ್ಯೂಟರ್ ಶಿಕ್ಷಣ ಹೊಂದಿರಬೇಕು.
2. **ಅಭ್ಯರ್ಥಿಗಳ ವಯೋಮಿತಿ:** ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕಕ್ಕೆ ಕನಿಷ್ಠ 18 ವರ್ಷಗಳಾಗಿರಬೇಕು ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಮತ್ತು ನಿಯಮಗಳನ್ವಯ ಈ ಕೆಳಕಂಡ ಗರಿಷ್ಠ ವಯೋಮಿತಿಗೊಳಪಟ್ಟಿರಬೇಕು.

1. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ – ಗರಿಷ್ಠ 40 ವರ್ಷಗಳು
2. ಇತರ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ (2ಎ, 2ಬಿ, 3ಎ, 3ಬಿ) – ಗರಿಷ್ಠ 38 ವರ್ಷಗಳು
3. ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ – ಗರಿಷ್ಠ 35 ವರ್ಷಗಳು

3. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ಅಭ್ಯರ್ಥಿ ಪಡೆದಿರುವ ಪ್ರಮಾಣ ಪತ್ರವನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿರಬೇಕು.
4. ಈ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಹಾಗೂ ಮೌಖಿಕ ಸಂದರ್ಶನ ನಡೆಸುವ ಮೂಲಕ ಆಯ್ಕೆ ಮಾಡಲಾಗುವುದು: 200 ಅಂಕಗಳ ಲಿಖಿತ ಪರೀಕ್ಷೆ ಇದ್ದು ಈ ಪೈಕಿ ಕನ್ನಡ ಭಾಷೆಗಾಗಿ 50 ಅಂಕಗಳು, ಸಾಮಾನ್ಯ ಇಂಗ್ಲೀಷ್‌ಗಾಗಿ 25 ಅಂಕಗಳು, ಸಾಮಾನ್ಯ ಜ್ಞಾನಕ್ಕಾಗಿ 25 ಅಂಕಗಳು, ಸಹಕಾರ ವಿಷಯಕ್ಕೆ 50 ಅಂಕಗಳು ಮತ್ತು ಭಾರತ ಸಂವಿಧಾನಕ್ಕೆ 25 ಅಂಕಗಳು, ಬ್ಯಾಂಕಿನ ಉದ್ದೇಶಗಳು ಮತ್ತು ಕಾರ್ಯಚಟುವಟಿಕೆಗಳಿಗೆ 25 ಅಂಕಗಳು = ಒಟ್ಟೂ 200 ಅಂಕಗಳಿಗೆ ಬಹು ಆಯ್ಕೆಮಾದರಿಯ (Objective type Multiple choice) ಪ್ರಶ್ನೆಗಳನ್ನು ಒಳಗೊಂಡಿರುತ್ತದೆ. ಅಭ್ಯರ್ಥಿಯು ಲಿಖಿತ ಪರೀಕ್ಷೆಯಲ್ಲಿ ಪಡೆಯುವ ಅಂಕಗಳನ್ನು ಶೇಕಡಾ 85 ಕ್ಕೆ ನಿಗದಿಪಡಿಸಿ, ಉಳಿದ ಪ್ರತಿಶತ 15 ಅಂಕಗಳನ್ನು ಸಂದರ್ಶನಕ್ಕೆ ನೀಡಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ 1:5 ಅನುಪಾತದಲ್ಲಿ ಮೌಖಿಕ ಸಂದರ್ಶನ ನಡೆಸಿ, ಆಯ್ಕೆ ಮಾಡಲಾಗುವುದು.
5. ಅರ್ಜಿಯನ್ನು ಸ್ವ– ಹಸ್ತಾಕ್ಷರದಲ್ಲಿ ಬರೆಯತಕ್ಕದ್ದು. ತಪ್ಪು ಹಾಗೂ ಅಪೂರ್ಣ ಮಾಹಿತಿ ನೀಡಿದ ಅರ್ಜಿಯನ್ನು ತಿರಸ್ಕರಿಸಲಾಗುವುದು.
6. ಪದವಿ/ಸ್ನಾತಕೋತ್ತರ ಪದವಿಯ ಎಲ್ಲಾ ವರ್ಷಗಳ / ಎಲ್ಲಾ ಸೆಮಿಸ್ಟರ್‌ಗಳ ಅಂಕಪಟ್ಟಿಯ ಸ್ವದೃಢೀಕೃತ ನಕಲು ಪ್ರತಿಯನ್ನು ಲಗತ್ತಿಸಬೇಕು.
7. **ಅರ್ಜಿ ಶುಲ್ಕ:** ರೂ.500/– (ರೂಪಾಯಿ ಐದು ನೂರು ಮಾತ್ರ) ಅರ್ಜಿ ಶುಲ್ಕವನ್ನು **"ಪ್ರಧಾನ ವ್ಯವಸ್ಥಾಪಕರು, ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್ ಲಿಮಿಟೆಡ್"** ಹೆಸರಿಗೆ ಡಿಮಾಂಡ್ ಡ್ರಾಫ್ಟ್ ಮೂಲಕ ಪಾವತಿಸತಕ್ಕದ್ದು. ಅರ್ಜಿ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ.
8. ಆಯ್ಕೆಯಾದ ಅಭ್ಯರ್ಥಿಗಳಿಗೆ ಕನಿಷ್ಠ 6 ತಿಂಗಳ ವರೆಗೆ ತರಬೇತಿ ಅವಧಿ (ಪ್ರೊಬೆಶನರಿ) ಇದ್ದು ಈ ಅವಧಿಯಲ್ಲಿ ವೇತನ ಶ್ರೇಣಿಯಲ್ಲಿನ ಕನಿಷ್ಠ ಮೂಲ ವೇತನ ಮಾತ್ರ ನೀಡಲಾಗುವುದು. ತರಬೇತಿ ಅವಧಿಯಲ್ಲಿ ಸೇವೆಯು ತೃಪ್ತಿಕರವಾಗದಿದ್ದಲ್ಲಿ ತರಬೇತಿ ಅವಧಿಯನ್ನು ವಿಸ್ತರಿಸುವ ಅಧಿಕಾರವು ಬ್ಯಾಂಕಿನ ಆಡಳಿತ ಮಂಡಳಿಗೆ ಇರುತ್ತದೆ.
9. ಆಯ್ಕೆಯಾದ ಅಭ್ಯರ್ಥಿಯು ತರಬೇತಿ ಅವಧಿಯನ್ನು ಹೊರತುಪಡಿಸಿ. ಕನಿಷ್ಠ 5 ವರ್ಷ ಈ ಬ್ಯಾಂಕಿನಲ್ಲಿ ಸೇವೆ ಸಲ್ಲಿಸುವ ಬಗ್ಗೆ ಕರಾರು ಬರೆದುಕೊಡತಕ್ಕದ್ದು.
10. ಬದಲಾದ ಕಾಯ್ದೆ ಮತ್ತು ನಿಯಮಗಳಿಗನುಗುಣವಾಗಿ ಹೆಚ್ಚಿನ ಷರತ್ತುಗಳನ್ನು ವಿಧಿಸುವ ಅಧಿಕಾರ ಬ್ಯಾಂಕಿನ ಸಿಬ್ಬಂದಿ ನೇಮಕಾತಿ ಸಮಿತಿಗೆ ಇರುತ್ತದೆ.
11. ಈ ಜಾಹಿರಾತನ್ನು ಬದಲಾಯಿಸುವ, ನೇಮಕಾತಿಯನ್ನು ಮುಂದೂಡುವ ಅಥವಾ ಅಗತ್ಯವಿದ್ದಲ್ಲಿ ರದ್ದು ಪಡಿಸುವ ಪೂರ್ಣ ಅಧಿಕಾರ ಆಡಳಿತ ಮಂಡಳಿಗೆ ಇರುತ್ತದೆ ಹಾಗೂ ಅಭ್ಯರ್ಥಿಯ ಆಯ್ಕೆಯ ಬಗ್ಗೆ ಬ್ಯಾಂಕಿನ ನೇಮಕಾತಿ ಸಮಿತಿ ನಿರ್ಣಯ ಅಂತಿಮವಾಗಿರುತ್ತದೆ.

ಬ್ಯಾಂಕಿನ ಅಧಿಕೃತ ಜಾಲತಾಣ "www.sirsiurbanbank.in" ದ ಮೂಲಕ ಅರ್ಜಿ ಫಾರ್ಮುಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. ಅರ್ಜಿ ನಮೂನೆಗಳನ್ನು ಭರ್ತಿ ಮಾಡಿ ಸೂಕ್ತ ದಾಖಲಾತಿಗಳನ್ನು ಸ್ವದೃಢೀಕೃತ ಪ್ರತಿಗಳೊಂದಿಗೆ ಅರ್ಜಿಯನ್ನು **"ಪ್ರಧಾನ ವ್ಯವಸ್ಥಾಪಕರು, ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್ ಲಿ., ಕೇಂದ್ರ ಕಛೇರಿ, ರಾಯರಪೇಟೆ, ಶಿರಸಿ – 581 401 (ಉ.ಕ)"**, ಈ ವಿಳಾಸಕ್ಕೆ ಪ್ರಕಟಣೆಯ ದಿನಾಂಕದಿಂದ 21 ದಿನಗಳೊಳಗಾಗಿ ತಲುಪುವಂತೆ ಸಲ್ಲಿಸತಕ್ಕದ್ದು. ಭರ್ತಿ ಮಾಡಿದ ಅರ್ಜಿಗಳನ್ನು ಬ್ಯಾಂಕಿನ ಕೇಂದ್ರ ಕಛೇರಿಗೆ **ದಿನಾಂಕ 06/09/2022** ರ ಸಾಯಂಕಾಲ 5:00 ಗಂಟೆಯೊಳಗೆ ತಲುಪುವಂತೆ ಕಳುಹಿಸತಕ್ಕದ್ದು. ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಸಾರ್ವತ್ರಿಕ ರಜೆ ದಿನವಾಗಿದ್ದರೆ, ಮುಂದಿನ ಕೆಲಸದ ದಿನವು ಅರ್ಜಿಯನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗಿರುತ್ತದೆ. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಹಾಗೂ ಅಪೂರ್ಣ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿಯ ಜೊತೆಗೆ **"ಪ್ರಧಾನ ವ್ಯವಸ್ಥಾಪಕರು, ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್ ಲಿ., ಶಿರಸಿ"** ಹೆಸರಿಗೆ ತೆಗೆದ ರೂ.500–00 (ರೂಪಾಯಿ ಐದು ನೂರು ಮಾತ್ರ) ರ ಡಿಮಾಂಡ ಡ್ರಾಫ್ಟನ್ನು ಸಲ್ಲಿಸತಕ್ಕದ್ದು. ಲಕೋಟೆಯ ಮೇಲೆ **"ಶಾಖಾ ವ್ಯವಸ್ಥಾಪಕ/ಲೆಕ್ಕಿಗ/ಕಾಯ್ದೆ ಅಧಿಕಾರಿ/ ವ್ಯವಸ್ಥಾಪಕರು (ಮಾಹಿತಿ ತಂತ್ರಜ್ಞಾನ) ಹುದ್ದೆಗೆ ಅರ್ಜಿ"** ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಕಾರಣ ಸದರಿ ಹುದ್ದೆಗಳು ಸಮನಾದ ಕೇಡರ್ ಹುದ್ದೆಗಳಾಗಿರುತ್ತವೆ.

ಸ್ಥಳ : ಶಿರಸಿ
**ದಿನಾಂಕ: 17/08/2022**

ಸಿಬ್ಬಂದಿ ನೇಮಕಾತಿ ಸಮಿತಿ ಪರವಾಗಿ
ಸಹಿ/–
ಪ್ರಧಾನ ವ್ಯವಸ್ಥಾಪಕರು
ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್ ಲಿಮಿಟೆಡ್,
ಶಿರಸಿ (ಉ.ಕ)